© Ph. : 27682035

# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ವಿ.ಜಿ. ಕಾಂಪ್ಲೆಕ್ಸ್, 1ನೇ ಮಹಡಿ, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.
ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.in

ಸಂ. ಬಿಐಎಪಿಎ/ಟಿಪಿ2/ಎಲ್ಎಒ/36/2015-16 | 4865 ದಿನಾಂಕ: 15 MAR 2016

**"ತಾತ್ಕಾಲಿಕ ಅನುಮೋದನೆ ಪತ್ರ"**

ವಿಷಯ : ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ವಿಜಯಪುರ ಹೋಬಳಿ, ಚಿಕ್ಕತತ್ತಮಂಗಲ ಗ್ರಾಮದ ಸರ್ವೆ ನಂ. 45/2 ರಲ್ಲಿನ 3ಎಕರೆ ವಿಸ್ತೀರ್ಣದ ಪ್ರದೇಶದಲ್ಲಿ 'ವಸತಿ' ಉದ್ದೇಶದ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ : 1) ಅರ್ಜಿದಾರರು ಸಲ್ಲಿಸಿರುವ ಅರ್ಜಿ ಸಂಖ್ಯೆ 3129 ದಿನಾಂಕ : 10-12-2015

2) ಸರ್ಕಾರದ ಅಧಿಸೂಚನೆ ಸಂಖ್ಯೆ : ಸಂವ್ಯಶಾಇ 24 ಶಾಸನ 2015, ಬೆಂಗಳೂರು ದಿನಾಂಕ: 10-09-2015

3) ದಿನಾಂಕ: 02-01-2016 ರಂದು ನಡೆದ ಪ್ರಾಧಿಕಾರದ 111 ನೇ ಸಭೆಯ ವಿಷಯ ಸಂ. 111 [3 (16)] ರ ಬಗ್ಗೆ ಕೈಗೊಂಡ ನಿರ್ಣಯ.

4) ಈ ಪ್ರಾಧಿಕಾರದ ಸಮ ಸಂಖ್ಯೆಯ ಪತ್ರ ದಿನಾಂಕ: 14-01-2016

5) ಅರ್ಜಿದಾರರು ದಿನಾಂಕ: 27-01-2016 ರ ಮನವಿ ಪತ್ರದೊಂದಿಗೆ ಯೂನಿಯನ್ ಬ್ಯಾಂಕ್, ಇಂದಿರಾನಗರ ಶಾಖೆ, ಬೆಂಗಳೂರು ಇಲ್ಲಿನ ದಿನಾಂಕ: 25-01-2016 ರ ಡಿ.ಡಿ. ಸಂಖ್ಯೆ 757529 ರಲ್ಲಿ ರೂ. 3,01,000-00 (ಮೂರು ಲಕ್ಷದ ಒಂದು ಸಾವಿರ ರೂಪಾಯಿಗಳು ಮಾತ್ರ) ಮತ್ತು ಡಿ.ಡಿ. ಸಂಖ್ಯೆ 757530 ರಲ್ಲಿ ರೂ. 500-00 (ಐದು ನೂರು ರೂಪಾಯಿಗಳು ಮಾತ್ರ) ಗಳಂತೆ ಒಟ್ಟು ರೂ. 3,01,500/- ಗಳನ್ನು ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ.

6) ಈ ಪ್ರಾಧಿಕಾರದ ಸಮ ಸಂಖ್ಯೆಯ ಪತ್ರ ದಿನಾಂಕ: 02-02-2016

7) **ದಿನಾಂಕ: 09–03–2016 ರ ಮನವಿ ಪತ್ರದೊಂದಿಗೆ ವಿನ್ಯಾಸದಲ್ಲಿನ ಸಾರ್ವಜನಿಕ ಪ್ರದೇಶಗಳಾದ ಉದ್ಯಾನವನ ಮತ್ತು 3.0 ಮೀಟರ್ ಪಾತ್ ವೇ/ ರಸ್ತೆ ಪ್ರದೇಶಗಳನ್ನು ಮುಖ್ಯಾಧಿಕಾರಿಗಳು, ವಿಜಯಪುರ ಪುರಸಭೆರವರಿಗೆ ಹಸ್ತಾಂತರಿಸಿರುವ ಕುರಿತು ಉಪನೋಂದಣಾಧಿಕಾರಿ, ದೇವನಹಳ್ಳಿ ರವರ ಕಛೇರಿಯ ಒಂದನೇ ಪುಸ್ತಕದ ದಸ್ತಾವೇಜು ಸಂಖ್ಯೆ: DNH-1-11091-2015-16 ಆಗಿ ಸಿ.ಡಿ ನಂಬರ್ DNHD582 ನೇ ದ್ದರಲ್ಲಿ ದಿನಾಂಕ: 17–02–2016 ರಂದು ಹಾಗೂ ನಾಗರೀಕ ಸೌಲಭ್ಯ ನಿವೇಶನವನ್ನು ಸದಸ್ಯ ಕಾರ್ಯದರ್ಶಿಗಳು, ಬಿಐಎಪಿಎ ರವರಿಗೆ ಹಸ್ತಾಂತರಿಸಿರುವ ಕುರಿತು ಉಪನೋಂದಣಾಧಿಕಾರಿ, ದೇವನಹಳ್ಳಿ ರವರ ಕಛೇರಿಯ ಒಂದನೇ ಪುಸ್ತಕದ ದಸ್ತಾವೇಜು ಸಂಖ್ಯೆ: DNH-1-11092-2015-16 ಆಗಿ ಸಿ.ಡಿ ನಂಬರ್ DNHD582 ನೇ ದ್ದರಲ್ಲಿ ದಿನಾಂಕ: 17–02–2016 ರಂದು ನೋಂದಾಯಿಸಿ ರುವ ಪರಿತ್ಯಜನಾ ಪತ್ರಗಳನ್ನು ಸಲ್ಲಿಸಿರುತ್ತಾರೆ.**

8) **ವಿನ್ಯಾಸದಲ್ಲಿ ಕಲ್ಪಿಸುವ ನೀರು ಸರಬರಾಜು ವ್ಯವಸ್ಥೆಯನ್ನು ನಿರ್ವಹಿಸಿಕೊಂಡು ಹೋಗುವ ಕುರಿತು ವಿಜಯಪುರ ಪುರಸಭೆಯವರಿಂದ ಪಡೆದಿರುವ ಒಪ್ಪಿಗೆ ಪತ್ರವನ್ನು ಪ್ರಾಧಿಕಾರಕ್ಕೆ ಸಲ್ಲಿಸಿರುವ ದಿನಾಂಕ: 14–03–2016**

***********

ವಿಷಯಕ್ಕೆ ಸಂಬಂಧಿಸಿದಂತೆ, **ಶ್ರೀಯುತರಾದ ಸೌರಭ್‌ಕುಮಾರ್, ನಿರ್ದೇಶಕರು, ಅಪರಂಜಿ ಎಸ್ಟೇಟ್ಸ್ ಲಿಮಿಟೆಡ್** ಇವರು ಉಲ್ಲೇಖ (1) ರಂತೆ ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ವಿಜಯಪುರ ಹೋಬಳಿ, ಚಿಕ್ಕತತ್ತಮಂಗಲ ಗ್ರಾಮದ ***ಸರ್ವೆ ನಂ. 45/2 ರಲ್ಲಿನ 3ಎಕರೆ*** ವಿಸ್ತೀರ್ಣದ ಜಮೀನಿನಲ್ಲಿ ವಸತಿ ವಿನ್ಯಾಸ ಅನುಮೋದನೆಗಾಗಿ ಅರ್ಜಿ ಸಲ್ಲಿಸಿದ್ದು, ಉಲ್ಲೇಖ (2) ರ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 24 ಶಾಸನ 2015, ಬೆಂಗಳೂರು ದಿನಾಂಕ: 10–09–2015 ರನ್ವಯ ಉಲ್ಲೇಖ (3) ರ ಪ್ರಾಧಿಕಾರದ ಸಭೆಯಲ್ಲಿ ಮಂಡಿಸಿ, ಸಭೆಯ ಅನುಮೋದನೆಗೆ ಪರಿಗಣಿಸಲು ಕೈಗೊಂಡ ನಿರ್ಣಯದನ್ವಯ ಉಲ್ಲೇಖ (4) ರ ಪ್ರಾಧಿಕಾರದ ಪತ್ರದಲ್ಲಿ ಶುಲ್ಕಗಳನ್ನು ಪಾವತಿಸಲು ತಿಳಿಸಲಾಗಿರುತ್ತದೆ.

ಉಲ್ಲೇಖ (5) ರಂತೆ ಅರ್ಜಿದಾರರು ದಿನಾಂಕ: 27–01–2016 ರ ಮನವಿ ಪತ್ರದೊಂದಿಗೆ ಯೂನಿಯನ್ ಬ್ಯಾಂಕ್, ಇಂದಿರಾನಗರ ಶಾಖೆ, ಬೆಂಗಳೂರು ಇಲ್ಲಿನ ದಿನಾಂಕ: 25–01–2016 ರ ಡಿ.ಡಿ. ಸಂಖ್ಯೆ 757529 ರಲ್ಲಿ ರೂ. 3,01,000–00 (ಮೂರು ಲಕ್ಷದ ಒಂದು ಸಾವಿರ ರೂಪಾಯಿಗಳು ಮಾತ್ರ) ಮತ್ತು ಡಿ.ಡಿ. ಸಂಖ್ಯೆ 757530 ರಲ್ಲಿ ರೂ. 500–00 (ಐದು ನೂರು ರೂಪಾಯಿಗಳು ಮಾತ್ರ) ಗಳಂತೆ ಒಟ್ಟು ರೂ. 3,01,500/– ಗಳನ್ನು ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ. ಉಲ್ಲೇಖ (6) ರ ಪ್ರಾಧಿಕಾರದ ಪತ್ರಗಳಲ್ಲಿ ವಿನ್ಯಾಸದಲ್ಲಿನ ಉದ್ಯಾನವನ ಹಾಗೂ ಪಾತ್ ವೇ/ ರಸ್ತೆ ಪ್ರದೇಶಗಳನ್ನು **ವಿಜಯಪುರ ಪುರಸಭೆಗೆ** ಹಾಗೂ ನಾಗರೀಕ ಸೌಲಭ್ಯ ನಿವೇಶನವನ್ನು **ಪ್ರಾಧಿಕಾರಕ್ಕೆ** ಪರಿತ್ಯಜನಾ ಪತ್ರದ ಮುಖಾಂತರ ನೋಂದಾಯಿಸಲು ಸೂಚಿಸಲಾಗಿರುತ್ತದೆ.

© Ph. : 27682035

# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ವಿ.ಜೆ. ಕಾಂಪ್ಲೆಕ್ಸ್, 1ನೇ ಮಹಡಿ, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.
ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.in

ಉಲ್ಲೇಖ (7) ರ ಅರ್ಜಿದಾರರ ಮನವಿ ಪತ್ರದೊಂದಿಗೆ ದಿನಾಂಕ: 09-03-2016 ರ ಮನವಿ ಪತ್ರದೊಂದಿಗೆ ವಿನ್ಯಾಸದಲ್ಲಿನ ಸಾರ್ವಜನಿಕ ಪ್ರದೇಶಗಳಾದ ಉದ್ಯಾನವನ ಮತ್ತು 3.0 ಮೀಟರ್ ಪಾತ್ ವೇ/ ರಸ್ತೆ ಪ್ರದೇಶಗಳನ್ನು ಮುಖ್ಯಾಧಿಕಾರಿಗಳು, ವಿಜಯಪುರ ಪುರಸಭೆರವರಿಗೆ ಹಸ್ತಾಂತರಿಸಿರುವ ಕುರಿತು ಉಪನೋಂದಣಾಧಿಕಾರಿ, ದೇವನಹಳ್ಳಿ ರವರ ಕಛೇರಿಯ ಒಂದನೇ ಪುಸ್ತಕದ ದಸ್ತಾವೇಜು ಸಂಖ್ಯೆ: DNH-1-11091-2015-16 ಆಗಿ ಸಿ.ಡಿ ನಂಬರ್ DNHD582 ನೇ ದ್ದರಲ್ಲಿ ದಿನಾಂಕ: 17-02-2016 ರಂದು ಹಾಗೂ ನಾಗರೀಕ ಸೌಲಭ್ಯ ನಿವೇಶನವನ್ನು ಸದಸ್ಯ ಕಾರ್ಯದರ್ಶಿಗಳು, ಬಿಐಎಪಿಎ ರವರಿಗೆ ಹಸ್ತಾಂತರಿಸಿರುವ ಕುರಿತು ಉಪನೋಂದಣಾಧಿಕಾರಿ, ದೇವನಹಳ್ಳಿ ರವರ ಕಛೇರಿಯ ಒಂದನೇ ಪುಸ್ತಕದ ದಸ್ತಾವೇಜು ಸಂಖ್ಯೆ: DNH-1-11092-2015-16 ಆಗಿ ಸಿ.ಡಿ ನಂಬರ್ DNHD582 ನೇ ದ್ದರಲ್ಲಿ ದಿನಾಂಕ: 17-02-2016 ರಂದು ನೋಂದಾಯಿಸಿರುವ ಪರಿತ್ಯಜನಾ ಪತ್ರಗಳನ್ನು ಹಾಗೂ ಅರ್ಜಿದಾರರು ವಿನ್ಯಾಸದಲ್ಲಿ ಕಲ್ಪಿಸುವ ನೀರು ಸರಬರಾಜು ವ್ಯವಸ್ಥೆಯನ್ನು ನಿರ್ವಹಿಸಿಕೊಂಡು ಹೋಗುವ ಕುರಿತು ವಿಜಯಪುರ ಪುರಸಭೆಯವರಿಂದ ಪಡೆದಿರುವ ಒಪ್ಪಿಗೆ ಪತ್ರವನ್ನು ಪ್ರಾಧಿಕಾರಕ್ಕೆ ಸಲ್ಲಿಸಿದ ಮೇರೆಗೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ವಿಜಯಪುರ ಹೋಬಳಿ, ಚಿಕ್ಕತತ್ತಮಂಗಲ ಗ್ರಾಮದ ***ಸರ್ವೆ ನಂ. 45/2 ರಲ್ಲಿನ 3ಎಕರೆ*** ಜಮೀನಿಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ/157/ಬಿಎಂಆರ್/2005 ದಿನಾಂಕ: 27-01-2009 ಮತ್ತು ತಿದ್ದುಪಡಿ ಆದೇಶ ದಿನಾಂಕ: 29-01-2009 ರಲ್ಲಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಮಹಾಯೋಜನೆಯು ಅನುಮೋದನೆಗೊಂಡಿದ್ದು, ಸದರಿ ಮಹಾಯೋಜನೆಯ ವಲಯ ನಿಯಮಾವಳಿಗಳನ್ವಯ ಮತ್ತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 (2) ರನ್ವಯ ವಸತಿ ವಿನ್ಯಾಸ ನಕ್ಷೆಗೆ ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು **"ತಾತ್ಕಾಲಿಕ ಅನುಮೋದನೆ"** ನೀಡಲಾಗಿದೆ.

1. ಈ ವಿನ್ಯಾಸವನ್ನು ಅಭಿವೃದ್ಧಿಪಡಿಸಲು ಮಾತ್ರ ಅನುಮೋದನೆ ನೀಡಲಾಗಿದೆ.
2. ಅನುಮೋದನೆ ನೀಡಿದ ದಿನಾಂಕದಿಂದ ಎರಡು ವರ್ಷದೊಳಗೆ ವಿನ್ಯಾಸವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸತಕ್ಕದ್ದು. ತಪ್ಪಿದಲ್ಲಿ ತಾತ್ಕಾಲಿಕ ಅನುಮೋದನೆಯನ್ನು ನವೀಕರಿಸಿಕೊಳ್ಳತಕ್ಕದ್ದು.
3. ಈ ಪ್ರಾಧಿಕಾರದಿಂದ ನೀಡಿರುವ Demarcation ನಕ್ಷೆಯಂತೆ ಜಮೀನಿನ ಮೇಲೆ ಅಳವಡಿಸಿರುವ ಅಳತೆಗೆ ಅನುಗುಣವಾಗಿ ತಾತ್ಕಾಲಿಕ ವಿನ್ಯಾಸ ನಕ್ಷೆಯನ್ನು ಅನುಮೋದಿಸಲಾಗಿದೆ.
4. ವಿನ್ಯಾಸದಲ್ಲಿ ಎಲ್ಲಾ ಸಿವಿಲ್ ಕಾಮಗಾರಿಗಳಾದ ರಸ್ತೆ, ಚರಂಡಿ, ಒಳಚರಂಡಿ, ನೀರಿನ ಸಂಪರ್ಕ ಹಾಗೂ ಇತರೆ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ಲೋಕೋಪಯೋಗಿ ಒಳನಾಡು ಬಂದರು ಮತ್ತು ಜಲಸಾರಿಗೆ ಇಲಾಖೆ, ತೋಟಗಾರಿಕೆ ಇಲಾಖೆ, ಬೆಸ್ಕಾಂ ಮತ್ತು ಸ್ಥಳೀಯ ಸಂಸ್ಥೆಯಿಂದ ದೃಢೀಕರಣ ಪತ್ರ ಪಡೆದು ಸಲ್ಲಿಸತಕ್ಕದ್ದು.
5. ವಿನ್ಯಾಸದಲ್ಲಿ ಕಾಯ್ದಿರಿಸಿರುವ ಉದ್ಯಾನವನ ಪ್ರದೇಶಕ್ಕೆ Fencing ಅಳವಡಿಸಿ ಉದ್ಯಾನವನವನ್ನು ಅಭಿವೃದ್ಧಿಪಡಿಸಿ ತೋಟಗಾರಿಕೆ ಇಲಾಖೆಯಿಂದ ದೃಢೀಕರಣ ಪತ್ರ ಸಲ್ಲಿಸತಕ್ಕದ್ದು.

6. ಪ್ರಸ್ತಾಪಿತ ವಿನ್ಯಾಸದಲ್ಲಿ ಸೂಕ್ತವಾದ ಕಡೆ ಪ್ರಮಾಣೀಕೃತ ರೀತಿಯ ಒಳಚರಂಡಿ ನೀರು ಶುದ್ಧೀಕರಣ ಘಟಕ (STP) ವನ್ನು ವಿನ್ಯಾಸದಲ್ಲಿ ನಿರ್ಮಾಣ ಮಾಡತಕ್ಕದ್ದು.

7. ಈ ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ವಿನ್ಯಾಸದಲ್ಲಿ ಯಾವುದೇ ಬದಲಾವಣೆಯನ್ನು ಮಾಡಬಾರದು.

8. ಈ ಪ್ರದೇಶದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಎರಡೂ ಕಡೆ ಹಾಗೂ ಉದ್ಯಾನವನಗಳಲ್ಲಿ ಹೊಸ ಸಸಿಗಳನ್ನು ಬೆಳೆಸುವುದು.

9. ಅನುಮೋದಿತ ವಿನ್ಯಾಸದ ಸೂಕ್ತ ಸ್ಥಳಗಳಲ್ಲಿ (RWH) ಮಳೆ ನೀರು ಸಂಗ್ರಹಣೆ ಪದ್ಧತಿಯನ್ನು ಕಡ್ಡಾಯವಾಗಿ ಅಳವಡಿಸಿ ಅಂತರ್ ಜಲವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.

10. ಅನುಮೋದಿತ ವಿನ್ಯಾಸದಲ್ಲಿರುವ ರಸ್ತೆಗಳು, ಉದ್ಯಾನವನವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿ ಈ ಪ್ರಾಧಿಕಾರದಿಂದ ತಿಳಿಸುವವರೆಗೆ ನಿರ್ವಹಣೆಯನ್ನು ಮಾಡತಕ್ಕದ್ದು ಹಾಗೂ ಸಾರ್ವಜನಿಕ ಸೌಲಭ್ಯಕ್ಕೆ ಕಾಯ್ದಿರಿಸಿದ ನಿವೇಶನವನ್ನು ಒತ್ತುವರಿಯಾಗದಂತೆ ಸಂರಕ್ಷಿಸತಕ್ಕದ್ದು.

11. ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಇತರೆ ಯಾವುದೇ ಇಲಾಖೆಗಳು ವಿಧಿಸುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು ಕೂಡಲೇ ರದ್ದಾಗುವುದು.

12. ವಿನ್ಯಾಸದಲ್ಲಿನ ರಸ್ತೆಗಳಿಂದ ಅಕ್ಕ–ಪಕ್ಕದ ಜಮೀನುಗಳಿಗೆ ಇರುವ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಬಂಧಿಸತಕ್ಕದ್ದಲ್ಲ.

13. ಪ್ರಸ್ತಾಪಿತ ಜಮೀನಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

14. ನೈಸರ್ಗಿಕವಾಗಿ ಹರಿಯುವ ನದಿ/ಹಳ್ಳ/ಕೆರೆ/ನಾಲಾ ಮುಂತಾದವುಗಳಿಗೆ ವಿನ್ಯಾಸದ ಮಲೀನ ನೀರನ್ನು ಬಿಡಬಾರದು.

15. ಈ ಅನುಮೋದಿತ ವಸತಿ ವಿನ್ಯಾಸ ನಕ್ಷೆ ಪ್ರದೇಶದಲ್ಲಿ ಬರುವ 'ಬಿ' ಖರಾಬು ಜಮೀನುಗಳು ಸರ್ಕಾರಕ್ಕೆ ಸೇರಿರುತ್ತದೆ. ಈ ಜಮೀನುಗಳನ್ನು ಯಥಾಸ್ಥಿತಿಯಂತೆ ಕಾಪಾಡತಕ್ಕದ್ದು ಹಾಗೂ ಅತಿಕ್ರಮಣ ಮಾಡಬಾರದು ಮತ್ತು ಇತರೆ ಉದ್ದೇಶಗಳಿಗಾಗಿ ಉಪಯೋಗಿಸತಕ್ಕದ್ದಲ್ಲ.

16. ಸದರಿ ವಿನ್ಯಾಸದಲ್ಲಿನ ರಸ್ತೆ, ಪಾದಚಾರಿ ಮಾರ್ಗ ಹಾಗೂ ಉದ್ಯಾನವನಗಳು ಸಾರ್ವಜನಿಕ ಸ್ವತ್ತಾಗಿರುತ್ತದೆ. ಆದ್ದರಿಂದ ಸಾರ್ವಜನಿಕ ಸ್ವತ್ತುಗಳನ್ನು ಮುಕ್ತವಾಗಿಡತಕ್ಕದ್ದು.

17. ಅನುಮೋದಿತ ವಿನ್ಯಾಸದಲ್ಲಿ ಬರುವ 18.0 ಮೀಟರ್‌ಗಿಂತ ಹೆಚ್ಚಿನ ಅಗಲದ ರಸ್ತೆಗಳ ಅಕ್ಕ–ಪಕ್ಕದಲ್ಲಿ ಪಾದಚಾರಿ ಮತ್ತು ಸೈಕಲ್ ಟ್ರಾಕನ್ನು ಅಳವಡಿಸಿಕೊಳ್ಳತಕ್ಕದ್ದು.

18. ಆರ್ಥಿಕವಾಗಿರುವ ದುರ್ಬಲರಾಗಿರುವ ಮತ್ತು ಕಡಿಮೆ ಆದಾಯದ ವರ್ಗದವರಿಗೆ ನಿವೇಶನ ಹಾಗೂ ಮನೆಗಳನ್ನು ಮೀಸಲಿಡುವ ಕುರಿತು ದಾಖಲಾಗಿರುವ ರಿಟ್ ಪಿಟಿಷನ್ ಸಂಖ್ಯೆ 9800/2015 (LB-RES) ಗೆ ಸಂಬಂಧಿಸಿದಂತೆ ನ್ಯಾಯಾಲಯವು ಹೊರಡಿಸುವ ಅಂತಿಮ ತೀರ್ಪಿಗೆ ಬದ್ಧರಾಗಿರತಕ್ಕದ್ದು.

19. ವಿನ್ಯಾಸ ಅಂಗೀಕಾರ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಅನುಮೋದನೆಯು ಯಾವ ಪೂರ್ವ ಸೂಚನೆಯು ಇಲ್ಲದೇ ತಂತಾನೇ ರದ್ದಾಗುತ್ತದೆ.

20. ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ವಿಧಿ 17 (4) ರಂತೆ ಕ್ರಮ ಜರುಗಿಸಲಾಗುವುದು.

ವಿನ್ಯಾಸದಲ್ಲಿನ ಕಾಮಗಾರಿಗಳನ್ನು ಅಭಿವೃದ್ಧಿಪಡಿಸಿ ಪೂರ್ಣಗೊಳಿಸಿರುವ ಬಗ್ಗೆ ವಿವಿಧ ಇಲಾಖೆಗಳಿಂದ ಅಂದರೆ ರಸ್ತೆ ಮತ್ತು ಮಳೆ ನೀರು ಚರಂಡಿ ಅಭಿವೃದ್ಧಿಪಡಿಸಿರುವ ಬಗ್ಗೆ ಲೋಕೋಪಯೋಗಿ ಇಲಾಖೆಯಿಂದ, ವಿದ್ಯುತ್ ಸರಬರಾಜು ಮಾಡಿರುವ ಬಗ್ಗೆ ಬೆಸ್ಕಾಂನಿಂದ, ಉದ್ಯಾನವನ ಅಭಿವೃದ್ಧಿಪಡಿಸಿರುವ ಬಗ್ಗೆ ತೋಟಗಾರಿಕೆ ಇಲಾಖೆಯಿಂದ ಮತ್ತು ಒಳಚರಂಡಿ ಒಳಗೊಂಡಂತೆ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ಹಾಗೂ ವಿನ್ಯಾಸದಲ್ಲಿ ಮೂಲಭೂತ ಸೌಲಭ್ಯಗಳು ಮತ್ತು ಸಾರ್ವಜನಿಕ ಪ್ರದೇಶಗಳ ನಿರ್ವಹಣೆ ಬಗ್ಗೆ ಸ್ಥಳೀಯ ಸಂಸ್ಥೆಯಿಂದ ಕಾಮಗಾರಿ ಮುಕ್ತಾಯ ಪತ್ರ ಪಡೆದು ವಿನ್ಯಾಸ ನಕ್ಷೆ ಅಂತಿಮ ಅನುಮೋದನೆ ಹಾಗೂ ನಿವೇಶನ ಬಿಡುಗಡೆಗೆ ಮನವಿ ಸಲ್ಲಿಸತಕ್ಕದ್ದು.

15.3.16

**ನಗರ ಮತ್ತು ಗ್ರಾಮಾಂತರ ಯೋಜನಾ**
**ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ,**
ಬೆಂಗಳೂರು ಅಂತರ ರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ

*ಇವರಿಗೆ :*

**ಶ್ರೀ ಸೌರಭ್‌ಕುಮಾರ್, ನಿರ್ದೇಶಕರು,**
**ಅಪರಂಜಿ ಎಸ್ಟೇಟ್ಸ್ ಲಿಮಿಟೆಡ್**
ನಂ. 16, ರೆಸ್ಟ್ ಹೌಸ್, ಕ್ರೆಸೆಂಟ್ ರಸ್ತೆ,
ಬೆಂಗಳೂರು – 560001